<u>2 ನೇ ಆಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬಳ್ಳಾರಿ</u>

<u>ಸತ್ರ ಮೊಕದ್ದಮೆ ಸಂಖ್ಯೆ: **106/2021**</u>

ಪಿ.ಡಬ್ಲುಃ **11** ಸಿಡಬ್ಲುಃ **17**

| | | |
|---|---|---|
| ಸಾಕ್ಷಿಯ ಹೆಸರು | : | ಶ್ರೀನಿವಾಸಲು |
| ತಂದೆಯಹೆಸರು | : | ಬಿ. ರಂಗಪ್ಪ |
| ವಯಸ್ಸು | : | **52** ವರ್ಷ |
| ವೃತ್ತಿ | : | ವ್ಯಾಪಾರ |
| ವಾಸಸ್ಥಳ | : | ಮೋಕಾ ಗ್ರಾಮ |

ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ **20-07-2024**

ಮುಖ್ಯ ವಿಚಾರಣೆ ಮಾನ್ಯ ಸಾರ್ವಜನಿಕ ಅಭಿಯೋಜಕರಿಂದಃ-

ಮೋಕಾ ಬಸ್ ಸ್ಟ್ಯಾಂಡ್ ಹತ್ತಿರ ನನಗೆ ಸೇರಿದ ಎಸ್ ಎಲ್ ವಿ ಟ್ರೇಡ್ರಸ್ ಇದೆ. ನಾನು ಸದರಿ ಅಂಗಡಿಯಲ್ಲಿ ಎಲೆಕ್ಟ್ರಿಕಲ್ ಉಪಕರಣಗಳನ್ನು ಮಾರಾಟ ಮಾಡುತ್ತೇನೆ. ನನಗೆ ಆರೋಪಿಯ ಪರಿಚಯ ಇಲ್ಲ. ಆರೋಪಿಯು ನನ್ನ ಅಂಗಡಿಗೆ ಯಾವತ್ತು ಬಂದಿಲ್ಲ ಮತ್ತು ಯಾವುದೇ ವಸ್ತುವನ್ನು ಖರೀದಿ ಮಾಡಿಲ್ಲ. ಈ ಪ್ರಕರಣದಲ್ಲಿ ಪೊಲೀಸರು ನನ್ನ ಹೇಳಿಕೆಯನ್ನು ಪಡೆದಿಲ್ಲ. ಠಾಣೆಗೆ ನನ್ನನ್ನು ಕರೆಸಿ ನನ್ನ ಸಹಿಯನ್ನು ಮಾತ್ರ ತೆಗೆದುಕೊಂಡಿದ್ದರು. ನಾನು ಪೊಲೀಸರ ಮುಂದೆ ಆರೋಪಿಯು ನಮ್ಮ ಅಂಗಡಿಯಲ್ಲಿ ಪೈಪ್ ಖರೀದಿ ಮಾಡಿದ ಬಗ್ಗೆ ಹೇಳಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀಸವಾಲು ಮಾಡಲು ಸ ಅ ರವರು ಪರವಾನಿಗೆ ಕೇಳುತ್ತಾರೆ. ಸ ಅ ರವರ ವಾದವನ್ನು ಕೇಳಿ ಸಾಕ್ಷಿಯ ಹೇಳಿಕೆಯನ್ನು ಹಾಗೂ ಮುಖ್ಯ ವಿಚಾರಣೆಯನ್ನು ಪರಿಶೀಲನೆ ಮಾಡಿ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪರವಾನಿಗೆ ಕೊಡಲಾಯಿತು).

<u>ಪಾಟೀಸವಾಲು ಮಾನ್ಯ ಸಾರ್ವಜನಿಕ ಅಭಿಯೋಜಕರಿಂದ:</u>

ನಾನು ದಿಃ **01-08-2021** ರಂದು ಈ ಪ್ರಕರಣದಲ್ಲಿ ಪೊಲೀಸರ ಮುಂದೆ ನನಗೆ ಈಗ ಓದಿ ಹೇಳಿದಂತೆ " ನಾನು ಮೇಲ್ಕಂಡ ವಿಳಾಸದಲ್ಲಿ --------- ಕೊಲೆ ಮಾಡಿರುವುದಾಗಿ ನನಗೆ ಗೊತ್ತಾಯಿತು " ಎಂದು ಹೇಳಿಕೆಯನ್ನು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಓದಿದ ಹೇಳಿದ ಹೇಳಿಕೆಯನ್ನು ನಿಪಿ-**21** ಎಂದು ಗುರುತಿಸಲಾಯಿತು. ನಿಪಿ-**21** ರಂತೆ ಹೇಳಿಕೆ ಕೊಟ್ಟಿದ್ದರೂ ಸಹ ಮತ್ತು ನನಗೆ ಪ್ರಕರಣದ ಬಗ್ಗೆ ಮಾಹಿತಿ ಇದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀಸವಾಲು 1 ರಿಂದ 3 ನೇ ಆರೋಪಿತ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.</u>

ಮರುವಿಚಾರಣೆ ಇಲ್ಲ.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ. ಸರಿ ಇದೆ.

**2** ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬಳ್ಳಾರಿ.